ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–338

**27 ಜೂನ್ 2026 * ಶನಿವಾರ * ಸಂಜೆ 6.00**

ಶ್ರೀ ಶಿವರಾತ್ರಿ ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಮೈಸೂರು

---

ದಿವ್ಯಾಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

ಅಧ್ಯಕ್ಷತೆ

**ಶ್ರೀ ಎಂ. ಚಂದ್ರಶೇಖರ್**

ಅಧ್ಯಕ್ಷರು, ಕನ್ನಡ ಸಾಹಿತ್ಯ ಕಲಾಕೂಟ, ಮೈಸೂರು

ಉಪನ್ಯಾಸ

**ಶರಣೆ ಎಂ.ಎ. ನೀಲಾಂಬಿಕೆ**

ಸಾಹಿತಿಗಳು, ನಿವೃತ್ತ ಉಪನ್ಯಾಸಕರು

ವಿಷಯ : ಶರಣರ ಪ್ರಸ್ತುತತೆ

ವಚನ ಗಾಯನ

ನಾದ ಹಂಸಿನಿ ಭಜನಾ ಸಂಘ

ಜೆ.ಪಿ.ನಗರ, ಮೈಸೂರು

---

ಪ್ರಾಯೋಜಕರು

ಶ್ರೀಮತಿ ಯು.ಎಂ. ಉಮಾದೇವಿ ಮತ್ತು ಪ್ರೊ. ಕೆ.ಜಿ. ಮಹಾದೇವಸ್ವಾಮಿ

ವಿಶ್ರಾಂತ ಪ್ರಾಂಶುಪಾಲರು

ಸಿ403, ವಿಠ್ಠಲ್ ಪ್ರೈಡ್ ಅಪಾರ್ಟ್‌ಮೆಂಟ್, ಹೆಚ್.ಡಿ. ಕೋಟೆ ರಸ್ತೆ, ಮೈಸೂರು

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಎಂ. ಚಂದ್ರಶೇಖರ್‌ರವರು** ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಕನ್ನಡ ಸಾಹಿತ್ಯ ಕಲಾಕೂಟದ ಸಂಸ್ಥಾಪಕ ಅಧ್ಯಕ್ಷರು. ಉತ್ತಮ ಸಂಘಟಕರು. ಕನ್ನಡ ನಾಡು, ನುಡಿಗೆ ಸಂಬಂಧಿಸಿದ ವಿಷಯಗಳಲ್ಲಿ ಪ್ರಮುಖ ಪಾತ್ರ ವಹಿಸುತ್ತಾ ಬಂದಿದ್ದಾರೆ. ಮೈಸೂರಿನ ಸಾಮಾಜಿಕ, ಸಾಹಿತ್ಯಿಕ ಕಾರ್ಯಕ್ರಮಗಳಲ್ಲಿ ಪ್ರಾಸ್ತಾವಿಕ ನುಡಿಗಳ ಮೂಲಕ 'ಪ್ರಾಸ್ತಾವಿಕ ಚಂದ್ರು' ಎಂಬ ಹೆಸರಿಗೆ ಪಾತ್ರರಾಗಿರುತ್ತಾರೆ. ವಾಗ್ಮಿಗಳು, ಬರಹಗಾರರು ಹಾಗೂ ಸಂಪಾದಕರು. 2026ನೇ ಸಾಲಿನ ಬಸವ ಬಳಗ ಒಕ್ಕೂಟ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

**ಶರಣೆ ಎಂ.ಎ. ನೀಲಾಂಬಿಕಾರವರು** ಖ್ಯಾತ ನಾಟಕಕಾರರಾಗಿದ್ದ ಶ್ರೀ ಸಿ. ಅಂಕಪ್ಪನವರ ಸುಪುತ್ರಿ. ಜೆಎಸ್‌ಎಸ್ ಶಿಕ್ಷಣಸಂಸ್ಥೆಗಳಲ್ಲಿ ಶಿಕ್ಷಕರಾಗಿ ಮತ್ತು ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಉತ್ತಮ ಪ್ರವಚನಕಾರರು, ಶರಣ ಸಾಹಿತ್ಯ-ಸಂಸ್ಕೃತಿಯ ಬಗ್ಗೆ ಅಪಾರ ಅಭಿಮಾನವುಳ್ಳವರು. ನಲವತ್ತಕ್ಕೂ ಹೆಚ್ಚು ಶರಣ ಸಾಹಿತ್ಯದ ಕೃತಿಗಳನ್ನು ರಚಿಸಿದ್ದಾರೆ. ಮೈಸೂರು ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಶ್ರೀ ಶಿವರಾತ್ರೀಶ್ವರ ಅಕ್ಕನ ಬಳಗದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಶ್ರೀಮತಿ ಶಕುಂತಲ ಜಯದೇವ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿ, ಗೌರವಗಳಿಗೆ ಪಾತ್ರರಾಗಿದ್ದಾರೆ.

**ಪ್ರೊ. ಕೆ.ಜಿ. ಮಹಾದೇವಸ್ವಾಮಿಯವರು** ಟಿ. ನರಸೀಪುರ ತಾಲ್ಲೂಕು ಕುರುಬೂರು ಗ್ರಾಮದ ಶ್ರೀ ಎಚ್.ಎಮ್. ಗುರುಮಲ್ಲೇದೇವರು ಮತ್ತು ಶ್ರೀಮತಿ ಗುರುಮಲ್ಲಮ್ಮನವರ ಮಕ್ಕಳು. ಎಂಎ ಪದವೀಧರರು. ಜೆಎಸ್‌ಎಸ್ ಕಾಲೇಜುಗಳಲ್ಲಿ ಅರ್ಥಶಾಸ್ತ್ರ ಅಧ್ಯಾಪಕರಾಗಿ, ಪರೀಕ್ಷಾ ನಿಯಂತ್ರಣಾಧಿಕಾರಿಯಾಗಿ ಮತ್ತು ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಖಾಸಗಿ ಕಾಲೇಜು ಅಧ್ಯಾಪಕರ ಸಂಘದ ಕಾರ್ಯಕಾರಿ ಸಮಿತಿ ಸದಸ್ಯರಾಗಿ, ಮೈಸೂರು ಜೆಪಿ ನಗರ ಶರಣ ವೇದಿಕೆಯ ಅಧ್ಯಕ್ಷರಾಗಿ, ಬಸವ ಸಮಿತಿಯ ಪ್ರಧಾನ ಕಾರ್ಯದರ್ಶಿಗಳಾಗಿಯೂ ಕಾರ್ಯನಿರ್ವಹಿಸಿರುತ್ತಾರೆ. ಪತ್ನಿ ಶ್ರೀಮತಿ ಯು.ಎಂ. ಉಮಾದೇವಿಯವರು ಗೃಹಿಣಿಯಾಗಿದ್ದು, ನಾದ ಹಂಸಿನಿ ಭಜನಾ ಸಂಘದ ಗೌರವಾಧ್ಯಕ್ಷರಾಗಿದ್ದಾರೆ. ಇವರಿಗೆ ಇಬ್ಬರು ಪುತ್ರರು ಶ್ರೀ ಕೆ.ಎಂ. ಗುರುಪ್ರಸನ್ನ, ಶ್ರೀ ಕೆ.ಎಂ. ಗಿರೀಶ್ ಹಾಗೂ ಪುತ್ರಿ ಶ್ರೀಮತಿ ಕೆ.ಎಂ. ಬಬಿತಾರವರು.